ಮೇ 4ರಂದು ಯುಜಿ ನೀಟ್ ಪರೀಕ್ಷೆ : ರಾಜ್ಯದಲ್ಲಿ 381 ಪರೀಕ್ಷಾ ಕೇಂದ್ರ

● ಪ್ರಜಾವಾಹಿನಿ–ಬೆಂಗಳೂರು

ರಾಷ್ಟ್ರದಾದ್ಯಂತ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ವತಿಯಿಂದ 2025ರ ಯುಜಿನೀಟ್ ಪರೀಕ್ಷೆಯು ಮೇ 4 ರಂದು ನಡೆಯಲಿದೆ. ಅಂದು ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ರಾಜ್ಯದಾದ್ಯಂತ ಒಟ್ಟು 381 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, 1,49,000 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಹಾಜರಾಗಲು ಅವಕಾಶವಿರುತ್ತದೆ ಎಂದು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ತಿಳಿಸಿದೆ.

ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪತ್ರದೊಂದಿಗೆ ಕಾಲೇಜಿನಿಂದ ನೀಡಿರುವ ಗುರುತಿನಚೀಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಡಿ.ಎಲ್, ಮತದಾರರ ಗುರುತಿನಚೀಟಿ ಅಥವಾ ಇತರೆ ಯಾವುದಾದರೂ ಅಂಗೀಕೃತ ಗುರುತಿನ ಚೀಟಿ ಜೊತೆ, ಒಂದು ಪೋಸ್ಟ್ ಕಾರ್ಡ್ ಮತ್ತು ಎರಡು ಪಾಸ್ ಪೋರ್ಟ್ ಅಳತೆಯ ಫೋಟೋಗಳನ್ನು ಕಡ್ಡಾಯವಾಗಿ ತೆಗೆದುಕೊಂಡು ಹಾಜರಾಗಬೇಕು ಹೇಳಿದೆ.

ಅಂದು ಬೆಳಿಗ್ಗೆ 11 ಗಂಟೆಯಿಂದ ಎನ್‌ಟಿಎ ವತಿಯಿಂದ ನೇಮಿಸಿರುವ ಏಜೆನ್ಸಿಗಳಿಂದ ಸಂಬಂಧಪಟ್ಟ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು ಹಾಗೂ ನಿಯೋಜಿತ ಪೊಲೀಸ್ ಸಿಬ್ಬಂದಿಯಿಂದ ವಿದ್ಯಾರ್ಥಿಗಳ ಸುರಕ್ಷತಾ ತಪಾಸಣೆಯನ್ನು ನಡೆಸಲಾಗುವುದು.

ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿದ್ದು, ವಿದ್ಯಾರ್ಥಿಗಳು ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ವಯ ಮಾರ್ಗಸೂಚಿಯನ್ನು ಪಾಲಿಸಬೇಕು.

ವಿದ್ಯಾರ್ಥಿಗಳು ಪೂರ್ಣ ತೋಳಿರುವ ಮೇಲಂಗಿ, ದೊಡ್ಡ ಬಟನ್ ಗಳಿರುವ ಅಂಗಿ, ಪ್ಯಾಂಟ್, ಶೂ, ಸಾಕ್ಸ್, ಎತ್ತರದ ಚಪ್ಪಲಿಗಳು, ಕಿವಿಯೋಲೆ, ಬಳೆ, ಸರ, ಕಾಲ್ಗೆಜ್ಜೆ, ಮೂಗುತಿ, ಜಡೆ ಕ್ಲಿಪ್ ಹಾಗೂ ಇತರ ಯಾವುದೇ ಲೋಹದ ಉಪಕರಣಗಳನ್ನು ಧರಿಸುವಂತಿಲ್ಲ ಹಾಗೂ ಯಾವುದೇ ರೀತಿಯ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವಂತಿಲ್ಲ ಮತ್ತು ಧರಿಸುವಂತಿಲ್ಲ ಸ್ಪಷ್ಟಪಡಿಸಿದೆ.

ಪ್ರವೇಶಾತಿ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿಕೊಂಡ ವಿದ್ಯಾರ್ಥಿಗಳು ತಮ ನೋಂದಣಿ ಸಂಖ್ಯೆ ಇರುವ ಕೊಠಡಿಗೆ ನೇರವಾಗಿ ತೆರಳತಕ್ಕದ್ದು. ಮಧ್ಯಾಹ್ನ 2 ರಿಂದ ಸಂಜೆ 5 ಗಂಟೆಯವರೆಗೆ ಪರೀಕ್ಷೆಯು ನಡೆಯಲಿದ್ದು, ಪರೀಕ್ಷಾ ಅವಧಿಯಲ್ಲಿ ಪ್ರತಿ ಗಂಟೆಗೊಂದು ಬಾರಿ ಬೆಲ್ ಮೂಲಕ ಸೂಚನೆ ನೀಡಲಾಗುವುದು.

ಪರೀಕ್ಷಾ ಕೇಂದ್ರಗಳಿಗೆ ನಿರಂತರ ವಿದ್ಯುತ್ ವ್ಯವಸ್ಥೆ, ಆರೋಗ್ಯ ಸಿಬ್ಬಂದಿ ಹಾಗೂ ತುರ್ತು ಸೇವೆಗಳ ನಿಯೋಜನೆ, ಪರೀಕ್ಷಾ ಕೇಂದ್ರಗಳ ಸ್ವಚ್ಛತೆ ಮತ್ತು ಪರೀಕ್ಷೆಗೆ ಹಾಜರಾಗುವ ದಿವ್ಯಾಂಗರು /ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಮಿಲ್ ಚೇರ್ ವ್ಯವಸ್ಥೆ ಹಾಗೂ ತುರ್ತು ಅಗ್ನಿ ಶಾಮಕ ವ್ಯವಸ್ಥೆಯನ್ನು ಜಿಲ್ಲಾಡಳಿತದ ವತಿಯಿಂದ ಮಾಡಲಾಗುತ್ತದೆ ಎಂದು ತಿಳಿಸಿದೆ.

ಎನ್‌ಟಿಎ ವತಿಯಿಂದ ಪರೀಕ್ಷಾ ಕೇಂದ್ರಕ್ಕೆ ಜಾಮರ್ ಅಳವಡಿಕೆ ಮತ್ತು ಫ್ರಿಸ್ಕಿಂಗ್ ಮಾಡಲು ಏಜೆನ್ಸಿ ನೇಮಿಸಿದ್ದು, ಈ ಬಗ್ಗೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಖಚಿತಪಡಿಸಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಪೊಲೀಸ್ ಸಿಬ್ಬಂದಿಯು ಪರೀಕ್ಷೆಗೆ ಹಾಜರಾಗಲಿರುವ ವಿದ್ಯಾರ್ಥಿಗಳನ್ನು ಸೂಕ್ತ ತಪಾಸಣೆಗೆ ಒಳಪಡಿಸುವರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾರಿಗೆ ಕ್ರಮವಹಿಸಲಾಗಿದ್ದು, ಪರೀಕ್ಷಾ ಕೇಂದ್ರಗಳಿಗೆ ನಿಯೋಜಿತ ಅಧಿಕಾರಿ/ಸಿಬ್ಬಂದಿಯನ್ನು ಹೊರತುಪಡಿಸಿ, ಇತರೆ ಯಾವುದೇ ಸಾರ್ವಜನಿಕರಿಗೆ ಪ್ರವೇಶವಿರುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

ನಂಜುಂಡೇಶ್ವರನ ದರ್ಶನ ಪಡೆದ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ

● ಪ್ರಜಾವಾಹಿನಿ–ಮೈಸೂರು

ದಕ್ಷಿಣ ಕಾಶಿ ನಂಜನಗೂಡು ಶ್ರೀ ನಂಜುಂಡೇಶ್ವರ ಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದ್ದ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಅವರು ರುದ್ರಾಭಿಷೇಕ ವಿಶೇಷ ಪೂಜೆ ಸಲ್ಲಿಸಿ ಹರಕೆ ತೀರಿಸಿದರು.

ಹೆಚ್.ಡಿ ದೇವೇಗೌಡ ಅವರನ್ನು ದೇವಾಲಯದ ಆಡಳಿತ ಮಂಡಳಿ ಮತ್ತು ತಾಲ್ಲೂಕು ಆಡಳಿತ ಸದಸ್ಯರು ನಾದಸ್ವರ ನುಡಿಸಿ ಹಾಗೂ ಹೂಗುಚ್ಛ ನೀಡಿ ಸ್ವಾಗತಿಸಿದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ದೇವೇಗೌಡರು, ನಂಜುಂಡೇಶ್ವರ ದೇವಾಲಯ ದಕ್ಷಿಣ ಭಾರತದಲ್ಲಿಯೇ ಅತ್ಯಂತ ಪುರಾತನ ಕಾಲದ್ದು, ದೇಶಾದ್ಯಂತ ಸಾಕಷ್ಟು ಭಕ್ತ ಸಮೂಹ ನಂಜುಂಡೇಶ್ವರನ ಸನ್ನಿಧಿಗೆ ಆಗಮಿಸುತ್ತದೆ. ಇಲ್ಲಿ ಅಭಿವೃದ್ಧಿಯನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸಿಲ್ಲ. ನಿರ್ವಹಣೆಯ ವ್ಯವಸ್ಥೆ ಇಲ್ಲದೆ ದೇವಾಲಯದ ಅಭಿವೃದ್ಧಿ ಕುಂಠಿತವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇವಾಲಯದ ಸನ್ನಿಧಿಯಲ್ಲಿ ರಾಜಕೀಯ ಮಾತನಾಡಬಾರದು. ನಮ್ಮ ಪಕ್ಷದ ಮುಖಂಡರು ಕಾರ್ಯಕರ್ತರ ಜೊತೆಗೂಡಿ ನಂಜುಂಡೇಶ್ವರನ ದರ್ಶನ ಮಾಡಿ ವಿಶೇಷ ಪೂಜೆ ಸಲ್ಲಿಸಲಾಗಿದೆ. ಗಣಪತಿ, ಪಾರ್ವತಿ ಅಮ್ಮ ಮತ್ತು ಕಾಲಭೈರವೇಶ್ವರನ ದರ್ಶನ ಪಡೆದು ಪುನೀತರಾನಾಗಿದ್ದೇನೆ. ಬಸವ ಜಯಂತಿ ಮತ್ತು ಅಕ್ಷಯ ತೃತೀಯ ಹಿನ್ನೆಲೆ ನಂಜುಂಡೇಶ್ವರನ ಸನ್ನಿಧಿಗೆ ಭೇಟಿ ನೀಡಿದ್ದು ತೃಪ್ತಿಕರವಾಗಿದೆ ಎಂದರು.

ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ನರಸಿಂಹ ಸ್ವಾಮಿಯ ಮನೆಗೆ ಭೇಟಿ ನೀಡಿ ಉಪಹಾರ ಸೇವಿಸಿ ಪಕ್ಷದ ಕಾರ್ಯಕರ್ತರ ಜೊತೆ ಸಮಾಲೋಚನೆ ನಡೆಸಿ ಮೈಸೂರಿನತ್ತ ತೆರಳಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಮಂಜೇಗೌಡ, ಮಾಜಿ ಶಾಸಕ ಅನ್ನದಾನಿ, ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು, ದೇವಾಲಯದ ಕಾರ್ಯನಿರ್ವಾಹಕ ಅಧಿಕಾರಿ ಜಗದೀಶ್ ಕುಮಾರ್, ಜೆಡಿಎಸ್ ಪಕ್ಷದ ಮುಖಂಡರಾದ ನರಸಿಂಹ ಮೂರ್ತಿ, ಮಹದೇವಸ್ವಾಮಿ, ಸಂಜಯ್ ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

ಬಸವ ಜಯಂತಿ ಆಚರಣೆ

● ಪ್ರಜಾವಾಹಿನಿ–ಪಾವಗಡ

ತಾಲೂಕು ಆಡಳಿತ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ವತಿಯಿಂದ ಬಸವ ಜಯಂತಿಯನ್ನು ಆಚರಿಸಲಾಯಿತು

ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ತಹಶೀಲ್ದಾರ್ ವರದರಾಜು ರವರು ಪ್ರಜಾಪ್ರಭುತ್ವದ ವೇದಿಕೆಗೆ ತಂದು ಅಭಿವ್ಯಕ್ತಿ ಸ್ವಾತಂತ್ರ್ಯದ ಚರ್ಚಾ ವೇದಿಕೆಯಾಗಿ ಬೆಳೆಸಿದರು. ಬಸವಣ್ಣ ಎಂಬ ವ್ಯಕ್ತಿತ್ವದ ಮತ್ತು ಶರಣ ಚಳುವಳಿಯ ಮಹಾನಡೆಯ ಸಂಗಮತ್ವವನ್ನು ಸದಾ ಸ್ಮರಿಸಬೇಕಿದೆ. ಬಸವಣ್ಣ ಅವರು ಮಹಾ ಮಾನವತಾವಾದಿಯಾಗಿ ಕಟ್ಟಿ ಬೆಳೆಸಿದ ಚಳವಳಿ ಕನ್ನಡ ನೆಲದಲ್ಲಿ ಹುಟ್ಟಿ ಬೆಳೆದ ಶರಣ ಚಳವಳಿ ಆಗಿದೆ.

ಕಾಯಕ, ದಾಸೋಹ ಮೂಲಕ ಸಮಾಜದಲ್ಲಿ ಸಮಾನತೆ ತರಲು ಬಸವೇಶ್ವರರು ಶ್ರಮಿಸಿದ್ದಾರೆ ಬಸವಣ್ಣನವರು ಸಾಮಾನ್ಯರು ಮಾತನಾಡುವ ಕನ್ನಡ ಭಾಷೆಯಲ್ಲಿ ವಚನಗಳನ್ನು ರಚಿಸಿದರು. ಈ ಮೂಲಕ ಜನಸಾಮಾನ್ಯರಿಗೂ ಅವರ ಸಂದೇಶಗಳು ಸುಲಭವಾಗಿ ತಲುಪಿತು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರೇಡ್ 2 ತಹಶೀಲ್ದಾರ್ ಚಂದ್ರಶೇಖರ್, ಗ್ರಾಮ ಆಡಳಿತಾಧಿಕಾರಿ ಈರಣ್ಣ ಗೋರ್ನಾಳ್, ರಾಜೇಶ್, ರವಿಕುಮಾರ್, ಪದ್ಮ, ಕಾರ್ತಿಕ್ ರಾಜನ್, ಪ್ರೆಸ್ ನಾಗಭೂಷಣ್, ಶ್ರೇಯಸ್, ಕೃಷ್ಣಮೂರ್ತಿ ವಕೀಲರಾದ ಆರ್ ಹನುಮಂತರಾಯ, ಎಂ ಜಿ ಮಂಜುನಾಥ್, ಗೋಪಾಲ್ ಸೇರಿದಂತೆ ಅಧಿಕಾರಿಗಳು ಹಲವು ಮುಖಂಡರು ಹಾಜರಿದ್ದರು.

ಡಾ. ಬಿ ಆರ್ ಅಂಬೇಡ್ಕರ್‌ಗೆ ಅಪಮಾನ : ಅಧಿಕಾರಿ ಅಮಾನತ್ತಿಗೆ ಆಗ್ರಹ

● ಪ್ರಜಾವಾಹಿನಿ–ಗುಡಿಬಂಡೆ

ಹಂಪಸಂದ್ರ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆ ಆಚರಿಸದೆ ಸರ್ಕಾರಿ ಆದೇಶಗಳನ್ನು ಪಾಲಿಸದೆ ಸಂವಿಧಾನ ಶಿಲ್ಪಿಗೆ ಅಪಮಾನ ಮಾಡಿರುವುದನ್ನು ಖಂಡಿಸಿ ಕಾರ್ಯನಿರ್ವಹಣಾ ಅಧಿಕಾರಿಗಳಿಗೆ ದಲಿತಪರ ಸಂಘಟನೆಗಳು ಇಂತಹ ಅಧಿಕಾರಿಯನ್ನು ಕೂಡಲೇ ಅಮಾನತ್ತುಗೊಳಿಸುವಂತೆ ಮನವಿ ಸಲ್ಲಿಸಿದರು.

ಕಾರ್ಯನಿರ್ವಹಣಾಧಿಕಾರಿಗಳಾದ ಓ ನಾಗಮಣಿ ರವರು ಮನವಿ ಸ್ವೀಕರಿಸಿ ಮಾತನಾಡಿ ತಾವು ನೀಡಿರುವ ಈ ಎಲ್ಲಾ ಬೇಡಿಕೆಗಳನ್ನು ಪರಿಶೀಲಿಸಿ, ಸಂಬಂಧಪಟ್ಟ ಮೇಲಿನ ಅಧಿಕಾರಿಗಳಿಗೆ ಪತ್ರ ರವಾನಿಸಿ ಶೀಘ್ರ ಕ್ರಮ ಜರುಗಿಸುವ ಭರವಸೆಯನ್ನು ನೀಡಿದರು.

ಸಂಘಟನೆಗಳ ಪರವಾಗಿ ದಲಿತ ಮುಖಂಡರಾದ ಆದಿನಾರಾಯಣಪ್ಪನವರು ಮಾತನಾಡಿ ಶೀಘ್ರವಾಗಿ ನಮ್ಮ ಎಲ್ಲಾ ಬೇಡಿಕೆಗಳನ್ನು ಈಡೇರಿಸಿಕೊಡದಲ್ಲಿ ಇದೇ ಕಚೇರಿ ಮುಂದೆ ಮುಂದಿನ ದಿನಗಳಲ್ಲಿ ಉಗ್ರ ಸ್ವರೂಪದ ಹೋರಾಟ ಹಮ್ಮಿಕೊಳ್ಳುತ್ತೇವೆ ಎಂದು ತಿಳಿಸಿ, ಸದ್ಯ ಹೋರಾಟವನ್ನು ಕೈಬಿಟ್ಟರು.

ಈ ಕಾರ್ಯಕ್ರಮದಲ್ಲಿ ದಲಿತ ಮುಖಂಡರಾದ ಆದಿನಾರಣಪ್ಪ, ಗ್ರಾಮ ಪಂಚಾಯಿತಿ ಸದಸ್ಯರಾದ ನಾರಾಯಣಸ್ವಾಮಿ, ಜೀವಿಕ ರಾಮಾಂಜಿ, ಸಂತೋಷ್, ಚಂಡೂರು ರಮಣ, ಕೆ ಎನ್ ನರಸಿಂಹಪ್ಪ, ಗುಡಿಬಂಡೆ ನಾಗರಾಜು,ಮಹೇಶ್, ಲಕ್ಷ್ಮಿ ನಾರಾಯಣ, ಮಂಜುನಾಥ ಎ, ಬ್ರಾಹ್ಮನಹಳ್ಳಿ ಮೂರ್ತಿ, ಎಂ ಸಿ ಚಿಕ್ಕ ನರಸಿಂಹಪ್ಪ, ಶ್ರೀಧರ್, ಹಂಪಸಂದ್ರ ಈಶ್ವರಪ್ಪ, ರಾಮಲಿಂಗಪ್ಪ, ಬಾಬು, ಕುಮಾರ, ನಾಗರಾಜ, ಹಾಗೂ ತಾಲೂಕಿನ ಎಲ್ಲಾ ದಲಿತಪರ ಕಾರ್ಯಕರ್ತರು ಹಾಜರಿದ್ದರು.

ಅಂಬೇಡ್ಕರ್ ನಾಮಫಲಕ ವಿರೂಪ : ದಲಿತ ಸಂಘಟನೆಗಳಿಂದ ಪ್ರತಿಭಟನೆ

● ಪ್ರಜಾವಾಹಿನಿ–ಮೈಸೂರು

ವಾಜಮಂಗಲ ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ನಾಮಫಲಕ ಹಾಗೂ ಫ್ಲೆಕ್ಸ್‌ಗೆ ಮಲ ಬಳಿದಿರುವ ಪ್ರಕರಣದಲ್ಲಿ ತಪ್ಪಿತಸ್ಥರನ್ನು ಬಂಧಿಸುವಂತೆ ಆಗ್ರಹಿಸಿ ಮಂಗಳವಾರ ಗ್ರಾಮದಿಂದ ನಗರದ ಸಿದ್ಧಾರ್ಥನಗರದ ಬುದ್ಧನ ಪ್ರತಿಮೆವರೆಗೆ ದಲಿತ ಸಂಘಟನೆಗಳು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದವು.

ಡಾ.ಬಿ.ಆರ್.ಅಂಬೇಡ್ಕರ್ ಹೋರಾಟ ಸಮಿತಿ ನೇತೃತ್ವದಲ್ಲಿ ನೂರಾರು ಮುಖಂಡರು, ಕಾರ್ಯಕರ್ತರು ಹೆಜ್ಜೆ ಹಾಕಿದರು. ಘಟನೆಯನ್ನು ಗಂಭೀರವಾಗಿ ತೆಗೆದುಕೊಳ್ಳದೆ ಪೊಲೀಸ್ ಇಲಾಖೆ ಹಾಗೂ ಸರ್ಕಾರ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಬೇರೆ ಪ್ರಕರಣಗಳಲ್ಲಿ ಕೃತ್ಯ ನಡೆದ 3 ದಿನದಲ್ಲೇ ಆರೋಪಿಗಳನ್ನು ಪತ್ತೆ ಹಚ್ಚುತ್ತಾರೆ. ಆದರೆ, ವಾಜಮಂಗಲ ಪ್ರಕರಣ ನಡೆದ 12 ದಿನವಾದರೂ ನಿರ್ಲಕ್ಷ್ಯ ವಹಿಸಿದ್ದಾರೆ. ಇದರ ಹಿಂದೆ ಷಡ್ಯಂತ್ರವಿದೆ. ಕೆಡಿಗೇಡಿಗಳನ್ನು ಬಂಧಿಸಿ ನ್ಯಾಯ ದೊರಕಿಸಿಕೊಡಬೇಕು. ಇಲ್ಲದಿದ್ದರೆ ರಾಜ್ಯದಾದ್ಯಂತ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಿಂಧುವಳ್ಳಿಯಲ್ಲೂ ಜನವರಿಯಲ್ಲಿ ಅಂಬೇಡ್ಕರ್ ನಾಮಫಲಕ ವಿರೂಪಗೊಳಿಸಲಾಗಿತ್ತು. ಮೂರು ತಿಂಗಳಾದರೂ ಆರೋಪಿಗಳನ್ನು ಪತ್ತೆ ಹಚ್ಚಿಲ್ಲ. ದಲಿತರು, ಶೋಷಿತರೆಂದರೆ ಇಷ್ಟೊಂದು ನಿರ್ಲಕ್ಷ್ಯವೇ? ನ್ಯಾಯಯುತವಾಗಿ ಬದುಕಲು ಅವಕಾಶವಿಲ್ಲವೆ ಎಂದು ಪ್ರಶ್ನಿಸಿದರು.

ದಸಂಸ ಜಿಲ್ಲಾ ಸಂಚಾಲಕ ಬೆಟ್ಟಯ್ಯ ಕೋಟೆ ಮಾತನಾಡಿ, ಸಮಾಜದಲ್ಲಿ ವಿಷ ಬೀಜ ಬಿತ್ತಲು ಜಾತಿವಾದಿ ಹಾಗೂ ಕೋಮುವಾದಿ ಶಕ್ತಿಗಳು ಕೆಲಸ ಮಾಡುತ್ತಿವೆ. ಎಲ್ಲಾ ಜಾತಿಯವರು ಸಾಮರಸ್ಯದಿಂದಿದ್ದ ವಾಜಮಂಗಲ ಗ್ರಾಮದಲ್ಲಿ ಒಡಕು ಮೂಡಿಸಲಾಗಿದೆ ಎಂದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಘಟನೆಯನ್ನು ಜಿಲ್ಲಾಡಳಿತ ಗಂಭೀರವಾಗಿ ತೆಗೆದುಕೊಂಡಿದ್ದು, ವಾರದೊಳಗೆ ಆರೋಪಿಗಳನ್ನು ಪತ್ತೆ ಹಚ್ಚಲಾಗುವುದು ಎಂದು ಭರವಸೆ ನೀಡಿದರು.

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ, ಬಿಎಸ್‌ಪಿ ರಾಜ್ಯ ಘಟಕದ ಅಧ್ಯಕ್ಷ ಕೃಷ್ಣಮೂರ್ತಿ, ಲೇಖಕ ಸಿದ್ಧಸ್ವಾಮಿ, ಮುಖಂಡರಾದ ಶಂಭುಲಿಂಗಸ್ವಾಮಿ, ಆಲಗೂಡು ಶಿವಕುಮಾರ್, ಮಣಿಯಯ್ಯ, ಕಲ್ಲಹಳ್ಳಿ ಕುಮಾರ್, ಹಾರೋಹಳ್ಳಿ ಸುರೇಶ್, ಮಲ್ಲಹಳ್ಳಿ ನಾರಾಯಣ, ಬನ್ನಳ್ಳಿ ಸೋಮಣ್ಣ, ನಗರ್ಲೆ ವಿಜಯಕುಮಾರ್, ಚೆನ್ನಯ್ಯ, ಭೀಮರಾಜ್, ಶಿವು, ರಾಜಣ್ಣ, ದೂರ ನಂದೀಶ್, ಚಿನ್ನಸ್ವಾಮಿ, ಸುರೇಶ್, ಮಂಜು ಪಾಲ್ಗೊಂಡಿದ್ದರು.

ವಿದ್ಯುತ್ ಬಿಲ್ ಸಕಾಲದಲ್ಲಿ ಪಾವತಿಸಿ

● ಪ್ರಜಾವಾಹಿನಿ–ಮಂಡ್ಯ

ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಲಾಗುತ್ತಿರುವ ಬೀದಿದೀಪ, ಕುಡಿಯುವ ನೀರಿನ ಕೊಳವೆಬಾವಿಗಳಿಗೆ ಬಳಕೆ ಮಾಡುವ ವಿದ್ಯುತ್ ಬಿಲ್ ಅನ್ನು ನಿಗದಿತವಾಗಿ ಪಾವತಿ ಮಾಡಬೇಕು ಎಂದು ರಾಜ್ಯ 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ.ನಾರಾಯಣಸ್ವಾಮಿ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಕಾವೇರಿ ಸಭಾಂಗಣದಲ್ಲಿ ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಡನೆ ಮಂಗಳವಾರ ಸಮಾಲೋಚನಾ ಸಭೆ ನಡೆಸಿ ಮಾತನಾಡಿದರು. ವಿದ್ಯುತ್ ಬಿಲ್ ಅನ್ನು ಸರ್ಕಾರ ರೀಕನ್ಸಿಲೇಷನ್ (ಹೊಂದಾಣಿಕೆ) ಮಾಡಿಸುತ್ತದೆ ಎಂಬ ಧೋರಣೆಯನ್ನು ಬಿಡಬೇಕು ಎಂದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಹಳಷ್ಟು ನಿರುಪಯುಕ್ತ ಬೋರ್‌ವೆಲ್‌ಗಳಿರುತ್ತವೆ. ಅವುಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿ. ಕೆಲವು ಬಾರಿ ಹಳೆಯ ವಿದ್ಯುತ್ ಬಿಲ್‌ಗಳ ಮೊತ್ತ ಸೇರಿಕೊಂಡು ಬಿಲ್ ಬರುತ್ತಿರುತ್ತದೆ. ಪರಿಶೀಲಿಸಿ ಹಣ ಪಾವತಿ ಮಾಡಿ ಎಂದು ಕಿವಿಮಾತು ಹೇಳಿದರು.

ಸಭೆಯಲ್ಲಿ ಹಾಜರಿದ್ದ ಗ್ರಾಮ ಪಂಚಾಯಿತಿ, ನಗರಸಭೆ, ಪುರಸಭೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಅಭಿಪ್ರಾಯ ಹಾಗೂ ಸಲಹೆಗಳನ್ನು ನೀಡಿದರು.

ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಣಕಾಸು ಆಯೋಗ ಕಳುಹಿಸಿರುವ ಪ್ರಶ್ನಾವಳಿ ಕುರಿತ ಮಾಹಿತಿಯನ್ನು ಸಭೆಯಲ್ಲಿ ಪರಿಶೀಲಿಸಲಾಯಿತು.

ಪಂಚಾಯಿತಿ ಸಂಸ್ಥೆಗಳ ಸಾಂಖ್ಯಿಕ ರಚನೆ, ಕಾರ್ಯಾಚರಣೆ, ಹುದ್ದೆಗಳು, ಆಯವ್ಯಯ, ವೆಚ್ಚಗಳ ವಿವರ ರಾಜ್ಯ ಮತ್ತು ಕೇಂದ್ರ ಹಣಕಾಸು ಆಯೋಗದ ಅನುದಾನ, ಹಂಚಿಕೆ, ಬಿಡುಗಡೆ, ಮಾಡಲಾದ ವೆಚ್ಚ ಕುರಿತ ವಿವರವನ್ನು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಧನುಷ್ ಅವರು ವಿವರಿಸಿದರು.

ಸಭೆಯಲ್ಲಿ ಮಂಡ್ಯ ನಗರಸಭೆ ಅಧ್ಯಕ್ಷ ನಾಗೇಶ್, 5ನೇ ಹಣಕಾಸು ಆಯೋಗದ ಸದಸ್ಯರಾದ ಆರ್.ಎಸ್. ಪೋಂಡೆ, ಮಹಮ್ಮದ್ ಸನಾಉಲ್ಲಾ, ಕಾರ್ಯದರ್ಶಿ ಆರ್. ಸ್ನೇಹಲ್, ಸಮಾಲೋಚಕ ಕೆಂಪೇಗೌಡ, ಸಿ.ಜಿ. ಸುಪ್ರಸನ್ನ